ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ನಮ್ಮ ಹೊಲ ನಮ್ಮ ರಸ್ತೆ ಯೋಜನೆ ಬಗ್ಗೆ

ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):-

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

348 (386+445) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017-18ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ನಮ್ಮ ಹೊಲ- ನಮ್ಮ ರಸ್ತೆ ಯೋಜನೆಯಡಿ ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಆದೇಶದಂತೆ "ನಮ್ಮ ಹೊಲ ನಮ್ಮ ರಸ್ತೆ" ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳಾವುವು ; ಈ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿದೆ ; (ಮಾಹಿತಿ ನೀಡುವುದು) ಸದರಿ ಕಾಮಗಾರಿಗಳಲ್ಲಿ ನಿಗದಿಪಡಿಸಿದ ಕಾಲಮಿತಿಯೊಳಗೆ ಕಾಮಗಾರಿಗಳು ಪೂರ್ತಿಯಾಗದೆ ವಿಳಂಬವಾಗಿರುವುದಕ್ಕೆ ಕಾರಣವೇನು ;

(ಇ) ಈ ಕಾಮಗಾರಿಗಳಿಗೆ ನಿಗದಿಪಡಿಸಿ, ಬಿಡುಗಡೆ ಮಾಡಿ, ವೆಚ್ಚ ಮಾಡಿರುವ ಅನುದಾನದ ಮೊತ್ತವೆಷ್ಟು ; (ವಿವರ ನೀಡುವುದು) ಕಾಮಗಾರಿಗಳು ಪೂರ್ತಿಯಾಗದೆ ಉಳಿದಿರುವ ಅನುದಾನದ ಮೊತ್ತವೆಷ್ಟು ; (ವಿವರ ನೀಡುವುದು)

(ಈ) ಈ ಯೋಜನೆಯಡಿ ಮಂಜೂರಾದ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗದಿರಲು ಕಾರಣಗಳೇನು ; ಯಾವಾಗ ಬಿಡುಗಡೆ ಮಾಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)